# Akashvani : Bangalore

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**09.08.2024 / 14.30 hrs**

ಮುಖ್ಯಾಂಶಗಳು

**೧. ಮೈಸೂರಿನಲ್ಲಿಂದು ಕಾಂಗ್ರೆಸ್ ಜನಾಂದೋಲನ ಸಮಾವೇಶ; ಬಡವರ ಕಲ್ಯಾಣಕ್ಕೆ ಗ್ಯಾರಂಟಿ ಯೋಜನೆಗಳು ಸಹಕಾರಿ - ಉಪಮುಖ್ಯಮಂತ್ರಿ**

**೨. ಮುಂದುವರೆದ ಬಿಜೆಪಿ-ಜೆಡಿಎಸ್ ಪಾದಯಾತ್ರೆ; ಇಂದೇ ಮೈಸೂರು ತಲುಪುವ ನಿರೀಕ್ಷೆ - ಆರ್.ಅಶೋಕ**

**೩. ಆದಿವಾಸಿಗಳ ಅಭಿವೃದ್ಧಿಗಾಗಿ ಕೇಂದ್ರದಿಂದ ೨೪ ಸಾವಿರ ಕೋಟಿ ರೂಪಾಯಿ ಮೀಸಲು - ಶಾಸಕ ಬಿ.ಪಿ.ಹರೀಶ್**

**೪. ಇಂದು ರಾಜ್ಯಾದ್ಯಂತ ನಾಗರಪಂಚಮಿ ಹಬ್ಬ ಆಚರಣೆ; ವಿವಿಧ ದೇವಾಲಯಗಳಲ್ಲಿ ಶಿವ ಹಾಗೂ ನಾಗದೇವರಿಗೆ ವಿಶೇಷ ಪೂಜೆ**

**೫. ಪ್ಯಾರಿಸ್ ಒಲಿಂಪಿಕ್ಸ್; ೪x೪೦೦ ಮೀಟರ್ ರಿಲೇಯಲ್ಲಿಂದು ಪುರುಷ ಮತ್ತು ಮಹಿಳೆಯರ ತಂಡಗಳ ಸ್ಪರ್ಧೆ**

**<><*<><>*><>**

ಬಿಜೆಪಿ-ಜೆಡಿಎಸ್ ಜಂಟಿಯಾಗಿ ನಡೆಸುತ್ತಿರುವ ಮೈಸೂರು ಚಲೋ ಪಾದಯಾತ್ರೆಗೆ ಪ್ರತಿಯಾಗಿ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿಂದು ಕಾಂಗ್ರೆಸ್ ಪಕ್ಷ ಜನಾಂದೋಲನ ಕಾರ್ಯಕ್ರಮವನ್ನು ಆಯೋಜಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಸೇರಿದಂತೆ ಹಲವು ಕಾಂಗ್ರೆಸ್ ಮುಖಂಡರು ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಬಡವರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚಕಾತ್ರಿ ಯೋಜನೆಗಳು ಸಹಕಾರಿಯಾಗಿವೆ ಎಂದು ಹೇಳಿದರು. ದೇಶದ ಹಾಗೂ ಸಂವಿಧಾನದ ರಕ್ಷಣೆಗಾಗಿ ಎನ್‌ಡಿಎ ಮಿತ್ರ ಪಕ್ಷಗಳ ವಿರುದ್ಧ ಹೋರಾಡುವ ಅಗತ್ಯವಿದೆ ಎಂದು ಅವರು ಹೇಳಿದರು. ಪಕ್ಷದ ಕಾರ್ಯಾಧ್ಯಕ್ಷ ಮತ್ತು ಅರಣ್ಯ ಸಚಿವ ಈಶ್ವರ್ ಖಂಡ್ರೆ ಮಾತನಾಡಿ, ರಾಜ್ಯದಿಂದ ಕೇಂದ್ರಕ್ಕೆ ೪ ಲಕ್ಷ ೫೦ಸಾವಿರ ಕೋಟಿ ರೂಪಾಯಿ ತೆರಿಗೆ ಪಾವತಿಸಲಾಗುತ್ತಿದೆ. ಆದರೆ ರಾಜ್ಯಕ್ಕೆ ಕೇವಲ ೪ ಸಾವಿರ ಕೋಟಿ ರೂಪಾಯಿ ಬಿಡುಗಡೆಯಾಗಿದೆ ಎಂದು ಹೇಳಿದರು. ಕಾಂಗ್ರೆಸ್ ಜಾರಿಗೊಳಿಸಿದ ಗ್ಯಾರಂಟಿ ಯೋಜನೆಗಳ ಯಶಸ್ಸು ಬಿಜೆಪಿ-ಜೆಡಿಎಸ್ ಪಕ್ಷಗಳಿಗೆ ಸಹಿಸಲು ಸಾಧ್ಯವಾಗುತ್ತಿಲ್ಲ. ಈ ಹಿನ್ನಲೆಯಲ್ಲಿ ಅವರು ಪಾದಯಾತ್ರೆ ಕೈಗೊಂಡಿದ್ದಾರೆ ಎಂದು ಈಶ್ವರ್ ಖಂಡ್ರೆ ಆರೋಪಿಸಿದರು. ಆಹಾರ ಸಚಿವ ಮುನಿಯಪ್ಪ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ನೇತೃತ್ವದಲ್ಲಿ ನಡೆಸಿದ ೨೦೨೩ರ ಚುನವಣೆಯಲ್ಲಿ ಜನರ ಆಶೀರ್ವಾದದಿಂದಾಗಿ ೧೩೬ ಸ್ಥಾನಗಳನ್ನು ಗೆಲ್ಲಲು ಸಾಧ್ಯವಾಯಿತು. ಜನರ ಕಲ್ಯಾಣಕ್ಕಾಗಿ ೫ ಗ್ಯಾರಂಟಿಗಳನ್ನು ಜಾರಿ ಮಾಡುವ ಜತೆಗೆ ೫ ಕೋಟಿಗೂ ಹೆಚ್ಚು ಜನರಿಗೆ ಯೋಜನೆಗಳನ್ನು ಯಶಸ್ವಿಯಾಗಿ ತಲುಪಿಸಲಾಗಿದೆ ಎಂದು ತಿಳಿಸಿದರು.

**<><*<><>*><>**

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕೃಷ್ಣರಾಜ ಸಾಗರ ಬೃಂದಾವನ ಉದ್ಯಾನವನ ಅಭಿವೃದ್ಧಿ ಸಂಬಂಧ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಂದು ಸ್ಥಳ ಪರಿಶೀಲನೆ ನಡೆಸಿದರು. ಈ ವೇಳೆ,

ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಶಾಸಕ ಗಣಿಗ ರವಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಕೆ.ಆರ್.ಎಸ್ ಬೃಂದಾವನ ಉದ್ಯಾನವನವನ್ನು ಡಿಸ್ನಿಲ್ಯಾಂಡ್ ಮಾದರಿಯಲ್ಲಿ ಅಭಿವೃದ್ಧಿಗೊಳಿಸಲಾಗುತ್ತಿದ್ದು, ಈ ಯೋಜನೆಯ ನೀಲ ನಕ್ಷೆಯನ್ನು ಪರಿಶೀಲಿಸಿ ಅಧಿಕಾರಿಗಳಿಗೆ ಅಗತ್ಯ ಸಲಹೆ-ಸೂಚನೆ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><*<><>*><>

ಬಿಜೆಪಿ-ಜೆಡಿಎಸ್‌ನಿಂದ ನಡೆಸುತ್ತಿರುವ ಮೈಸೂರು ಚಲೋ ಪಾದಯಾತ್ರೆ ಇಂದು ಶ್ರೀರಂಗಪಟ್ಟಣದಿಂದ ಮುಂದುವರೆದಿದೆ. ಈ ನಡುವೆ ಮಂಡ್ಯದಲ್ಲಿ ಸುದ್ದಿ ಗೋಷ್ಠಿ ನಡೆಸಿ ಮಾತನಾಡಿದ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಶ್ರೀರಂಗಪಟ್ಟಣದಿಂದ ಆರಂಭವಾಗಿರುವ ೭ನೇ ದಿನದ ಪಾದಯಾತ್ರೆ ಇಂದು ಸಂಜೆ ಮೈಸೂರು ತಲುಪಲಿದೆ. ನಾಳೆ ಬೆಳಿಗ್ಗೆ ಅಲ್ಲಿ ಬೃಹತ್ ಸಮಾವೇಶವನ್ನು ಆಯೋಜಿಸಲಾಗಿದೆ ಎಂದರು. ಸರ್ಕಾರದ ಅವ್ಯವಹಾರಗಳನ್ನು ತಪ್ಪುಗಳನ್ನು ಜನರ ಮುಂದೆ ಇಟ್ಟು ದಾಖಲೆಗಳೊಂದಿಗೆ ವಿಧಾನಸಭೆಯಲ್ಲಿ ಸರ್ಕಾರವನ್ನು ಪ್ರಶ್ನಿಸುವುದು ವಿರೋಧ ಪಕ್ಷದ ಕರ್ತವ್ಯವಾಗಿದೆ ಎಂದು ಹೇಳಿದರು.

<><*<><>*><>

ದೇಶದ ಆದಿವಾಸಿಗಳ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ ೧೪ ಸಾವಿರ ಕೋಟಿ ರೂಪಾಯಿ ಮೀಸಲಿರಿಸಿದೆ ಎಂದು ಶಾಸಕ ಬಿ.ಪಿ.ಹರೀಶ್ ಹೇಳಿದ್ದಾರೆ. ದಾವಣಗೆರೆಯಲ್ಲಿಂದು ಹಮ್ಮಿಕೊಂಡಿದ್ದ ೩೦ನೇ ವಿಶ್ವ ಆದಿವಾಸಿ ದಿನಾಚರಣೆ ಹಾಗೂ ಆದಿವಾಸಿಗಳ ಕಲಾ ಮೇಳ ಮೆರವಣಿಗೆ ಉದ್ಘಾಟಿಸಿ ಅವರು ಮಾತನಾಡಿದರು. ಆದಿವಾಸಿಗಳ ವಾಸಸ್ಥಾನ ಅಭಿವೃದ್ಧಿ ಮತ್ತು ಅವರ ಮಕ್ಕಳ ವಿಧ್ಯಾಭ್ಯಾಸ ಹಾಗೂ ವಿದ್ಯಾರ್ಥಿವೇತನಕ್ಕಾಗಿ ಕೇಂದ್ರ ಸರ್ಕಾರ ೧೪ ಸಾವಿರ ಕೋಟಿ ರೂಪಾಯಿ ಮೀಸಲಿರಿಸಿದೆ. ಇದರ ಸದ್ಬಳಕೆಗೆ ಆದಿವಾಸಿ ಸಮುದಾಯ ಮುಂದಾಗಬೇಕಿದೆ. ಆದಿವಾಸಿ ಸಮುದಾಯ ಮಕ್ಕಳಿಗೆ ಕಡ್ಡಾಯ ಶಿಕ್ಷಣ ಕೊಡಿಸಲು ಎಲ್ಲ ೪೮ ಆದಿವಾಸಿ ಸಮುದಾಯದ ಜನರು ಮುಂದೆ ಬರಬೇಕೆಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ೧೮ ಆದಿವಾಸಿ ಪಿಎಚ್‌ಡಿ ಪದವಿಧರರಿಗೆ ಆದಿವಾಸಿ ಸಿರಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

<><*<><>*><>

ಮಾನವ ಹಕ್ಕುಗಳ ಆಯೋಗದ ಹೆಸರಿನಲ್ಲಿ ಸರ್ಕಾರಿ ನೌಕರರು ಹಾಗೂ ಇತರರನ್ನು ಬೆದರಿಸುತ್ತಿರುವ ಕುರಿತು ಮಾಹಿತಿ ಲಭ್ಯವಾಗಿದ್ದು, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಪೊಲೀಸರಿಗೆ ಸೂಚನೆ ನೀಡಲಾಗಿದೆ ಎಂದು ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಟಿ. ಶ್ಯಾಮ್ ಭಟ್ ಹೇಳಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಯೋಗದ ಹೆಸರಿನೊಂದಿಗೆ ಕೆಲವು ಸಂಘಟನೆಗಳು ಹಾಗೂ ಸಂಸ್ಥೆಗಳ ಹೆಸರುಗಳನ್ನು ನೋಂದಣಿ ಮಾಡಿಸಿಕೊಳ್ಳುತ್ತಿರುವ ಕುರಿತಂತೆ ಬಾಗಲಕೋಟೆ ಜಿಲ್ಲೆಯಲ್ಲಿ ಎರಡು ಪ್ರಕರಣಗಳು ಪತ್ತೆಯಾಗಿದೆ. ಇನ್ನು ಕೆಲವರು ತಮ್ಮ ವಾಹನಗಳ ಮೇಲೆ ಮಾನವ ಹಕ್ಕುಗಳ ಆಯೋಗದ ಫಲಕ ಹಾಕಿಸುವ ಜತೆಗೆ ನಕಲಿ ವಿಸಿಟಿಂಗ್ ಕಾರ್ಡ್‌ಗಳನ್ನು ತಯಾರಿಸಿ, ಅಧಿಕಾರಿಗಳ ಮೇಲೆ ಪ್ರಭಾವ ಬೀರುವ ಕೆಲಸ ಮಾಡುತ್ತಿದ್ದಾರೆ. ಇಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಬ್ರಿಟಿಷರೇ ಭಾರತ ಬಿಟ್ಟು ತೊಲಗಿ ಚಳುವಳಿ ದಿನ ಅಂಗವಾಗಿ ಬೆಂಗಳೂರಿನಲ್ಲಿಂದು ಬಿಬಿಎಂಪಿ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ನಗರದ ಮಹಾತ್ಮ ಗಾಂಧೀಜಿ ರಸ್ತೆಯಲ್ಲಿರುವ ಗಾಂಧೀಜಿಯವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಪುಷ್ಪ ನಮನ ಸಲ್ಲಿಸಿದರು. ಸರ್ವಧರ್ಮ ಪ್ರಾರ್ಥನಾ ಕಾರ್ಯಕ್ರಮದಲ್ಲಿ ಪ್ರತಿಭಾ ಬಾಲಮಂದಿರ ಮಕ್ಕಳಿಂದ ಗೀತ ವಾಚನ, ಶ್ರೀಮತಿ ದೀಪಿಕಾ ಶ್ರೀಕಾಂತ್ ರವರಿಂದ ವೈಷ್ಣವ

ಜನತೋ, ಹಡ್ಸನ್ ಚರ್ಚಿನ ಫಾದರ್ ಶ್ರೀ ರೆವೆರೆಂಡ್ ಆಲ್ಫ್ರೆಡ್ ಸುದರ್ಶನ್ ಮತ್ತು ತಂಡದಿಂದ ಬೈಬಲ್ ವಾಚನ, ಗುರುದ್ವಾರದ ಶ್ರೀ ಗುರುಸಿಂಗ್ ಸಭಾ ಮತ್ತು ತಂಡದವರಿಂದ ಗುರು ಗ್ರಂಥ ವಾಚನ, ಮೌಲ್ವಿ ಹಫೀಜ್ ಶಾಬೀರ್ ಹುಸೇನ್ ರವರಿಂದ ಖುರಾನ್ ವಾಚನ ಮಾಡಲಾಯಿತು.

<><*<><>*><>

ಇಂದು ರಾಜ್ಯಾದ್ಯಂತ ನಾಗರಪಂಚಮಿ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ಶ್ರಾವಣ ಮಾಸದ ಶುಕ್ಲ ಪಕ್ಷದ ೫ನೇ ದಿನದಂದು ಆಚರಿಸಲಾಗುವ ಈ ಹಬ್ಬದ ದಿನ ಶಿವನಿಗೆ ಹಾಗೂ ನಾಗ ದೇವರಿಗೆ ವಿಶೇಷ ಪೂಜೆ ಸಲ್ಲಿಸಲಾಗುತ್ತದೆ. ಜೀವನ ಸುಖ, ಸಮೃದ್ಧಿ ಹಾಗೂ ಶಾಂತಿಯಿಂದ ತುಂಬುವ ಪ್ರಾರ್ಥನೆಯೊಂದಿಗೆ ನಾಗ ದೇವರಿಗೆ ಹಾಲುಣಿಸುವ ಜತೆಗೆ ಶಿವ ದೇವರಿಗೆ ವಿಶೇಷ ಅಭಿಷೇಕ ಕೈಗೊಳ್ಳಲಾಗುತ್ತದೆ. ಹಬ್ಬದ ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ನಾಡಿನ ಸಮಸ್ತ ಜನತೆಗೆ ಶುಭಾಶಯ ಕೋರಿದ್ದು, ನಾಡಿನಲ್ಲಿ ಸುಖ, ಶಾಂತಿ ಹಾಗೂ ಸಮೃದ್ಧಿ ನೆಲಸಲು ಪ್ರಾರ್ಥಿಸುವುದಾಗಿ ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ತಿಳಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೂಡ ನಾಡಿನ ಸಮಸ್ತ ಜನತೆಗೆ ನಾಗರಪಂಚಮಿ ಹಬ್ಬದ ಶುಭಾಶಯ ಕೋರಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನಾಗರಕಲ್ಲುಗಳಿಗೆ ಹಾಗೂ ಹುತ್ತಗಳಿಗೆ ಪೂಜೆ ಸಲ್ಲಿಸಿ, ತನಿ ಎರೆಯುವ ಮೂಲಕ ಆಚರಿಸಲಾಯಿತು. ನಾಗರಪಂಚಮಿ ಅಂಗವಾಗಿ ದೊಡ್ಡಬಳ್ಳಾಪುರ ತಾಲೂಕಿನ ಘಾಟಿ ಪುಣ್ಯಕ್ಷೇತ್ರದಲ್ಲಿನ ನಾಗರಕಲ್ಲುಗಳಿಗೆ ಭಕ್ತಾದಿಗಳು ಹಾಲೆರೆದು ಪೂಜೆ ಸಲ್ಲಿಸಿದರು. ಚಿಕ್ಕಮಗಳೂರು ಜಿಲ್ಲೆಯ ಬೋಳ ರಾಮೇಶ್ವರ ದೇವಾಲಯ ಸೇರಿದಂತೆ ವಿವಿಧ ಮಠ ಹಾಗೂ ದೇವಾಲಯಗಳಿಗೆ ಭಕ್ತರು ಭೇಟಿ ನೀಡಿ ನಾಗ ದೇವರಕಲ್ಲುಗಳಿಗೆ ಹಾಲು ಎರೆದು ಪೂಜೆ ಸಲ್ಲಿಸುತ್ತಿದ್ದಾರೆ. ಚಿತ್ರದುರ್ಗ ಜಿಲ್ಲೆಯಲ್ಲಿ ದೇವಸ್ಥಾನದ ನಾಗರಕಟ್ಟೆಗಳು, ಹುತ್ತ ಮತ್ತು ಮನೆಯಲ್ಲೇ ಸ್ಥಾಪಿಸಲಾದ ಮಣ್ಣಿನ ಮತ್ತು ಪಂಚಲೋಹದ ನಾಗಪ್ಪನಿಗೆ ಹಾಲೆರೆಯುವ ಮೂಲಕ ನಾಗರ ಪಂಚಮಿಯನ್ನು ಆಚರಿಸಲಾಯಿತು. ಮುಂಜಾನೆ ನಾಲ್ಕು ಘಂಟೆಯಿಂದ ಮಡಿಯುಟ್ಟು ಕಂಕಣಕಟ್ಟಿಕೊಂಡು ಅಕ್ಕಿಯಿಂದ ತಯಾರಿಸಿದ ವಿವಿಧ ನೈವೇದ್ಯಗಳನ್ನು ತಟ್ಟೆಯಲ್ಲಿಟ್ಟುಕೊಂಡು ಮನೆಯವರೆಲ್ಲಾ ಹೋಗಿ ದೇವರ ಕಟ್ಟೆಗೆ ಹಾಲು ಎರೆಯುವುದು ದೃಶ್ಯ ಸಾಮಾನ್ಯವಾಗಿತ್ತು.

<><*<><>*><>

ನಿರುದ್ಯೋಗಿ ವಿದ್ಯಾವಂತ ಯುವಕರು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಮುದ್ರಾ ಯೋಜನೆ, ವಿಶ್ವಕರ್ಮ ಯೋಜನೆ, ಸ್ಟ್ಯಾಂಡ್ ಆಫ್ ಇಂಡಿಯಾ ಮುಂತಾದ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಆರ್ಥಿಕವಾಗಿ ಸಬಲರಾಗಬೇಕೆಂದು ಯಳನಡು ಕರ್ನಾಟಕ ಗ್ರಾಮೀಣ ಬ್ಯಾಂಕಿನ ವ್ಯವಸ್ಥಾಪಕರಾದ ರಕ್ಷಿತ್ ಕುಮಾರ್ ತಿಳಿಸಿದ್ದಾರೆ. ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲೂಕಿನ ಯಳನಾಡು ಗ್ರಾಮದಲ್ಲಿ ಆಯೋಜಿಸಿದ್ದ ಜನ ಸುರಕ್ಷಾ ಶಿಬಿರದಲ್ಲಿ ಮಾತನಾಡಿದ ಅವರು, ಸಾಮಾಜಿಕ ಭದ್ರತಾ ಯೋಜನೆಗಳಾದ ಪ್ರಧಾನಮಂತ್ರಿ ಸುರಕ್ಷಾ ಜೀವನ ಜ್ಯೋತಿ, ಜೀವನ ಜ್ಯೋತಿ ವಿಮಾ ಯೋಜನೆ, ಅಟಲ್ ಪಿಂಚಣಿ ಯೋಜನೆ ಮುಂತಾದವುಗಳನ್ನು ಬ್ಯಾಂಕುಗಳ ಮುಖಾಂತರ ನೊಂದಣಿ ಮಾಡಿಸಿಕೊಂಡು ಭವಿಷ್ಯದ ಅನಿವಾರ್ಯ ಸಂದರ್ಭಗಳಲ್ಲಿ ವಿಮಾ ಹಣ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಇಂದು ಕುಸ್ತಿಯಲ್ಲಿ, ಅಮನ್ ಸೆಹ್ರಾವತ್ ಪುರುಷರ ೫೭ ಕೆಜಿ ಫ್ರೀಸ್ಟೈಲ್ ವಿಭಾಗದಲ್ಲಿ ಸ್ಪರ್ಧಿಸಲಿದ್ದಾರೆ. ಅಥ್ಲೆಟಿಕ್ಸ್‌ನಲ್ಲಿ, ಭಾರತದ ಪುರುಷರ ಮತ್ತು ಮಹಿಳೆಯರ ೪x೪೦೦ ಮೀ ರಿಲೇ ತಂಡಗಳು ಸಹ ಸ್ಪರ್ಧಿಸಲಿವೆ. ಪುರುಷರ ೪x೪೦೦ ಮೀ ರಿಲೇ ತಂಡವು ಮಧ್ಯಾಹ್ನ ೨:೩೫ ಕ್ಕೆ ಆಡಲಿದೆ. ಅಂತೆಯೇ, ಮಹಿಳೆಯರ ೪x೪೦೦ ಮೀ ರಿಲೇ ತಂಡದ ಸ್ಪರ್ಧೆಯನ್ನು ಮಧ್ಯಾಹ್ನ ೨:೧೦ಕ್ಕೆ

ನಿಗದಿಪಡಿಸಲಾಗಿದೆ. ಗಾಲ್ಫ್‌ನಲ್ಲಿ, ಅದಿತಿ ಅಶೋಕ್ ಮತ್ತು ದೀಕ್ಷಾ ದಾಗರ್ ಅವರು ಲೆ ಗಾಲ್ಫ್ ನ್ಯಾಷನಲ್‌ನ ಅಲ್ಬಾಟ್ರೋಸ್ ಕೋರ್ಸ್‌ನಲ್ಲಿ ೩ ನೇ ಸುತ್ತಿನಲ್ಲಿ ಭಾಗವಹಿಸಲಿದ್ದಾರೆ. ೨೦೨೦ರ ಟೋಕಿಯೋ ಒಲಿಂಪಿಕ್ಸ್‌ನಲ್ಲಿ ಅದಿತಿ ನಾಲ್ಕನೇ ಸ್ಥಾನ ಪಡೆದಿದ್ದರು,  ಈ ಒಲಿಂಪಿಕ್ಸ್‌ನಲ್ಲಿ ಮೊದಲ ಎರಡು ಸುತ್ತುಗಳ ನಂತರ ಟಿ-೧೪ ಆಗಿದ್ದಾರೆ. ದೀಕ್ಷಾ ಕೂಡ ಟಿ-೧೪ ಆಗಿದ್ದು, ಮೂರನೇ ಸುತ್ತು ಮಧ್ಯಾಹ್ನ ನಡೆಯಲಿದೆ. ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ, ಭಾರತದ ನೀರಜ್ ಚೋಪ್ರಾ ಕಳೆದ ರಾತ್ರಿ ಪುರುಷರ ಜಾವೆಲಿನ್‌ನಲ್ಲಿ ೮೯.೪೫ ಮೀಟರ್ ಎಸೆಯುವುದರೊಂದಿಗೆ  ಬೆಳ್ಳಿ ಪದಕ ಗೆದ್ದರು. ೯೨.೯೭ ಮೀಟರ್ ಎಸೆದ ಪಾಕಿಸ್ತಾನದ ಅರ್ಷದ್ ನದೀಮ್ ಚಿನ್ನದ ಪದಕವನ್ನು ಪಡೆದರು. ಭಾರತದಲ್ಲಿ ನೀರಜ್ ಚೋಪ್ರಾ ಸ್ವಾತಂತ್ರ್ಯದ ನಂತರ  ಅಥ್ಲೆಟಿಕ್ಸ್‌ನಲ್ಲಿ ಎರಡು ಒಲಿಂಪಿಕ್ ಪದಕಗಳನ್ನು ಪಡೆದ ಮೊದಲ ಭಾರತೀಯ ಅಥ್ಲೀಟ್ ಆಗಿದ್ದಾರೆ. ಭಾರತದ ಪುರುಷರ ಹಾಕಿ ತಂಡ ಸ್ಪೇನ್ ತಂಡವನ್ನು ೨-೧ ಅಂತರದಲ್ಲಿ ಸೋಲಿಸುವ ಮೂಲಕ ಕಂಚಿನ ಪದಕವನ್ನು ತನ್ನದಾಗಿಸಿಕೊಂಡಿದೆ. ಪ್ಯಾರಿಸ್ ಒಲಂಪಿಕ್ಸ್‌ನಲ್ಲಿ ಕಂಚಿನ ಪದಕ ಜಯಿಸಿದ ಭಾರತದ ಪುರುಷರ ಹಾಕಿ ತಂಡಕ್ಕೆ  ಹಾಕಿ ಇಂಡಿಯಾ ಪ್ರತಿಯೊಬ್ಬ ಆಟಗಾರನಿಗೆ ೧೫ ಲಕ್ಷ ರೂಪಾಯಿ ಮತ್ತು ಸಹಾಯಕ ಸಿಬ್ಬಂದಿಗೆ  ೭.೫ ಲಕ್ಷ ರೂಪಾಯಿ ನಗದು ಬಹುಮಾನವನ್ನು ಘೋಷಿಸಿದೆ. ಈವರೆಗೆ  ಭಾರತ ೪ ಕಂಚು, ೧ ಬೆಳ್ಳಿ ಸೇರಿದಂತೆ ಒಟ್ಟು ೫ ಪದಕಗಳನ್ನು ತನ್ನದಾಗಿಸಿಕೊಂಡಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ  <>*><>**